# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**21.06.2024 / 18.40 hrs**

ಮುಖ್ಯಾಂಶಗಳು

**೧. ಹತ್ತನೇ ಅಂತಾರಾಷ್ಟ್ರೀಯ ಯೋಗ ದಿನ; ರಾಜ್ಯಾದ್ಯಂತ ವಿಶೇಷ ಕಾರ್ಯಕ್ರಮ**

**೨. ವಿಜಯನಗರ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ವಿವಿಧ ಇಲಾಖೆಗಳ ಯೋಜನಾ ಪ್ರಗತಿ ಪರಿಶೀಲಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**

**೩. ನೀಟ್ ಪರೀಕ್ಷೆ ಪ್ರಕರಣ; ನಿಷ್ಪಕ್ಷಪಾತ ತನಿಖೆಗೆ ಸಿಬಿಐಗೆ ವಹಿಸಲು ಸಚಿವ ಶರಣ ಪ್ರಕಾಶ್ ಪಾಟೀಲ್ ಆಗ್ರಹ**

**೪. ರಾಜ್ಯದ ಒಳನಾಡು, ಕರಾವಳಿ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಇಂದಿನಿಂದ ೨೫ ರವರೆಗೆ ಭಾರೀ ಮಳೆ ಸಾಧ್ಯತೆ**

**<><*<><>*><>**

೧೦ನೇ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ವಿಶ್ವಾದ್ಯಂತ ಇಂದು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. "ಸ್ವಂತ ಮತ್ತು ಸಮಾಜಕ್ಕಾಗಿ ಯೋಗ" ಎಂಬುದು ಈ ವರ್ಷದ ಧ್ಯೇಯ ವಾಕ್ಯವಾಗಿದೆ. ಬೆಂಗಳೂರಿನಲ್ಲಿಂದು ವಿಧಾನಸೌಧದ ಮುಂಭಾಗದಲ್ಲಿ ಆಯುಷ್ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ೧೦ನೇ ಅಂತಾರಾಷ್ಟ್ರೀಯ ಯೋಗದಿನ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಯೋಗ, ಮಾನಸಿಕವಾಗಿ ಶಾಂತಿ ಹಾಗೂ ಭಾವನಾತ್ಮಕವಾಗಿ ತೃಪ್ತಿ ನೀಡುತ್ತದೆ. ದೇಹ, ಮನಸ್ಸು ಮತ್ತು ಭಾವನೆಗಳನ್ನು ಸಮತೋಲನಗೊಳಿಸಲು ಯೋಗ ಉತ್ತಮ ಮಾರ್ಗವಾಗಿದೆ. ಯೋಗವು ಭಾರತೀಯ ಸಂಪ್ರದಾಯ ಮತ್ತು ಸಂಸ್ಕೃತಿಯ ಅಮೂಲ್ಯ ಕೊಡುಗೆಯಾಗಿದೆ ಎಂದರು. ತಾವು ಸ್ವತಃ ಯೋಗಪಟುವಾಗಿದ್ದು, ಸಾರ್ವಜನಿಕರೆಲ್ಲರೂ ಯೋಗಾಭ್ಯಾಸವನ್ನು ತಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಂಡು, ಇತರರನ್ನು ಯೋಗ ಮಾಡುವಂತೆ ಪ್ರೇರೇಪಿಸಬೇಕೆಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲರೊಂದಿಗೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಬಳ್ಳಾರಿಯಲ್ಲಿಂದು ಆಯೋಜಿಸಲಾಗಿದ್ದ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾರ್ಮಿಕ ಸಚಿವ ಸಂತೋಷ್ ಲಾಡ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಸಂಸದ ಈ.ತುಕಾರಾಂ, ಸರ್ಕಾರದ ಕಾರ್ಯದರ್ಶಿ ತ್ರಿಲೋಕ್ ಚಂದ್ರ ಮತ್ತಿತರರು ಪಾಲ್ಗೊಂಡಿದ್ದರು. ಚನ್ನಪಟ್ಟಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಯೋಗಕ್ಕೆ ಐದು ಸಾವಿರ ವರ್ಷಗಳ ಇತಿಹಾಸವಿದ್ದು, ನಮ್ಮ ದೇಶದ ಆಸ್ತಿಯಾಗಿದೆ. ಯೋಗಕ್ಕೆ ಪ್ರೋತ್ಸಾಹ ಹಾಗೂ ಪ್ರಚಾರ ನೀಡುವುದು ನಮ್ಮ ಕರ್ತವ್ಯ ಎಂದು ಹೇಳಿದರು.

**<><*<><>*><>**

ಹತ್ತನೇ ಅಂತಾರಾಷ್ಟ್ರೀಯ ಯೋಗ ದಿನವಾದ ಇಂದು ರಾಜ್ಯದ ವಿವಿಧ ಜಿಲ್ಲೆಗಳಲ್ಲಿಂದು ವಿಶೇಷ ಯೋಗ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು. ಸಂಸದರು, ಶಾಸಕರು ಸೇರಿದಂತೆ ಹಲವು ಗಣ್ಯರು ಯೋಗಾಭ್ಯಾಸದಲ್ಲಿ ಭಾಗವಹಿಸಿ, ಯೋಗ ಜೀವನ ಪದ್ಧತಿಯ ಸಾರವನ್ನು ತಿಳಿಸಿದೆ.ಧಾರವಾಡದಲ್ಲಿ ಆಯೋಜಿಸಿದ್ದ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಕರ್ನಾಟಕ ಬಾಲ ವಿಕಾಸ ನೂತನ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮಕ್ಕಳ ಉತ್ತಮ ಆರೋಗ್ಯ, ಸದೃಡತೆ, ಮಾನಸಿಕ ಬೆಳವಣಿಗೆಗೆ ಯೋಗ ಸಹಕಾರಿಯಾಗಿದೆ. ಮಕ್ಕಳಿಗೆ ನಿರಂತರವಾಗಿ ಯೋಗ ಕಲಿಸಲು ಕರ್ನಾಟಕ ಬಾಲ ವಿಕಾಸ ಅಕಾಡಮಿಯ ಅನುದಾನದಲ್ಲಿ ಶೇಕಡ ೨೦ ರಷ್ಟು ಅನುದಾನ ಮೀಸಲು ಇಡಲಾಗುವುದು ಎಂದು ಹೇಳಿದರು. ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ, ನರೇಗಾ ಯೋಜನೆಯ ಅಡಿಯಲ್ಲಿ ಅಭಿವೃದ್ಧಿಪಡಿಸಿರುವ ಅಮೃತ ಸರೋವರ ಹಾಗು ಕಲ್ಯಾಣಿ ದಡದಲ್ಲಿ ಯೋಗ ದಿನಾಚರಣೆಯ ಅಂಗವಾಗಿ ಕೂಲಿ ಕಾರ್ಮಿಕರಿಗೆ ಯೋಗಭ್ಯಾಸಗಳನ್ನು ಮಾಡಿಸಲಾಯಿತು. ತುಮಕೂರು ಜಿಲ್ಲೆಯ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ನರೇಗಾ ಯೋಜಯಡಿ ನಿರ್ಮಾಣವಾಗಿರುವ ಅಮೃತ ಸರೋವರದ ಸಮೀಪ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಅಮೃತ ಸರೋವರದ ದಂಡೆಯ ಮೇಲೆ ಯೋಗಾಸನ ಮಾಡುವ ಮೂಲಕ ಜಿಲ್ಲೆಯಲ್ಲಿ ಯೋಗ ದಿನಾಚರಣೆಯನ್ನು ವಿಶೇಷವಾಗಿ ಆಚರಿಸಲಾಗಿದೆ.

**<><*<><>*><>**

ವಿಜಯನಗರ ಜಿಲ್ಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ಕೃಷಿ ಇಲಾಖೆಗೆ ಸಂಬಂಧಿಸಿದ ಮಾಹಿತಿ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬರ ಪರಿಹಾರ ವಿತರಣೆಯಲ್ಲಿ ಜಿಲ್ಲೆ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಿದ್ದಕ್ಕೆ ಹರ್ಷ ವ್ಯಕ್ತಪಡಿಸಿದರು. ಜಿಲ್ಲೆಯ ರೈತರಿಗೆ ಬಿತ್ತನೆ ಬೀಜ ಮತ್ತು ಗೊಬ್ಬರಗಳ ಕೊರತೆ ಉಂಟಾಗಬಾರದು ಎಂದು ಕೃಷಿ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು. ರಾಜ್ಯಸರ್ಕಾರದಿಂದ ೧೩೦ ಕೋಟಿ ರೂಪಾಯಿಯ ಸಂಪೂರ್ಣ ಬರ ಪರಿಹಾರ ಮೊತ್ತವನ್ನು ಜಿಲ್ಲೆಗೆ ಈಗಾಗಲೇ ವಿತರಿಸಲಾಗಿದೆ. ಬೆಳೆ ನಷ್ಟ ಅನುಭವಿಸಿರುವ ಎಲ್ಲಾ ರೈತರ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ ಪರಿಹಾರದ ಹಣ ಜಮೆ ಮಾಡಲಾಗಿದೆ ಎಂದರು. ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಪರಿಹಾರ ನೀಡಲು ವಿಳಂಬವಾಗಿರುವ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಅವರು, ತ್ವರಿತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಶೈಕ್ಷಣಿಕವಾಗಿ ಜಿಲ್ಲೆ ೧೦ನೇ ಸ್ಥಾನದಿಂದ ೨೬ನೇ ಸ್ಥಾನಕ್ಕೆ ಕುಸಿದಿರುವ ಕುರಿತು ಬೇಸರ ವ್ಯಕ್ತಪಡಿಸಿದ ಮುಖ್ಯಮಂತ್ರಿ ಸಭೆಯ ನಡುವೆಯೇ ಶಿಕ್ಷಣ ಇಲಾಖೆ ಕಾರ್ಯದರ್ಶಿ ರಿತೀಶ್ ಅವರಿಗೆ ಕರೆ ಮಾಡಿ, ಸಾರ್ವಜನಿಕ ಶಿಕ್ಷಣದ ಉಪನಿರ್ದೇಶಕರು ಹಾಗೂ ಸಂಬಂಧಿತ ಶಿಕ್ಷಣಾಧಿಕಾರಿಗಳನ್ನು ಅಮಾನತುಗೊಳಿಸುವಂತೆ ಆದೇಶಿಸಿದರು.

**<><*<><>*><>**

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧಿತರಾಗಿರುವ ನಟ ದರ್ಶನ್ ಅವರನ್ನು ನ್ಯಾಯಾಂಗ ಬಂಧನಕ್ಕೆ ಕಳುಹಿಸಿದಾಗ ಜೈಲಿನಲ್ಲಿ ಯಾವುದೇ ಹೆಚ್ಚುವರಿ ಸೌಲಭ್ಯಗಳನ್ನು ನೀಡಲಾಗುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ. ಚಿತ್ರದುರ್ಗ ಮೂಲದ ೩೩ ವರ್ಷದ ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಅವರನ್ನು ನ್ಯಾಯಾಲಯ ೨ ದಿನಗಳ ಪೊಲೀಸ್ ಕಸ್ಟಡಿಗೆ ಒಪ್ಪಿಸಿದೆ. ಅಷ್ಟರೊಳಗೆ ತನಿಖೆ ಪೂರ್ಣಗೊಂಡರೆ, ದರ್ಶನ್ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗುವುದು' ಎಂದು ಅವರು ತಿಳಿಸಿದರು. ಈ ಪ್ರಕರಣದಲ್ಲಿ ಯಾವುದೇ ಸಚಿವರು ಹಸ್ತಕ್ಷೇಪ ಮಾಡಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ರೇಣುಕಾಸ್ವಾಮಿ ಕೊಲೆ ಆರೋಪದ ಮೇಲೆ ದರ್ಶನ್, ಪವಿತ್ರಾ ಗೌಡ ಸೇರಿ ೧೭ ಮಂದಿಯನ್ನು ಬಂಧಿಸಲಾಗಿದೆ.

**<><*<><>*><>**

ವೈದ್ಯಕೀಯ ಪ್ರವೇಶಾತಿಗೆ ನಡೆಯುವ ನೀಟ್ ಪರೀಕ್ಷೆಯಲ್ಲಿ ಭಾರೀ ಅಕ್ರಮ ನಡೆದಿರುವುದು ಬೆಳಕಿಗೆ ಬಂದಿದ್ದು, ನಿಷ್ಪಕ್ಷಪಾತವಾಗಿ ತನಿಖೆ ಕೈಗೊಳ್ಳಬೇಕೆಂದು ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಹಾಗೂ ಜೀವನೋಪಾಯ ಸಚಿವ ಡಾ.ಶರಣ್ ಪ್ರಕಾಶ್ ಪಾಟೀಲ್ ಆಗ್ರಹಿಸಿದ್ದಾರೆ. ರಾಯಚೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೀಟ್-ಯುಜಿ ಹಾಗೂ ಯುಜಿಸಿ-ನೆಟ್ ಪರೀಕ್ಷೆಯಲ್ಲಿ ನಡೆದಿರುವ ಅಕ್ರಮಗಳನ್ನು ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕೆಂದು ದೇಶಾದ್ಯಂತ ಪ್ರತಿಭಟನೆಗಳು ನಡೆಯುತ್ತಿವೆ. ಆದರೂ ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸದಿರುವುದು ನೋವಿನ ಸಂಗತಿ ಎಂದು ಹೇಳಿದರು. ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಈ ಪ್ರಕರಣದಲ್ಲಿ ಯಾವುದೇ ರಾಜಕಾರಣವನ್ನು ತರದೆ, ತನಿಖೆಯನ್ನು ತಕ್ಷಣ ಸಿಬಿಐಗೆ ವಹಿಸಬೇಕು ಹಾಗೂ ತಪ್ಪತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಶರಣಪ್ರಕಾಶ್ ಪಾಟೀಲ್ ಒತ್ತಾಯಿಸಿದರು.

**<><*<><>*><>**

ಇಂದು ನಡೆದ ಬಳ್ಳಾರಿ ಪಾಲಿಕೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಮುಲ್ಲಂಗಿ ನಂದೀಶ್ ನೂತನ ಮೇಯರ್ ಆಗಿ ಮತ್ತು ಡಿ.ಸುಕುಂ ಅವರು ಉಪ ಮೇಯರ್ ಆಗಿ ಆಯ್ಕೆಯಾಗಿದ್ದಾರೆ. ಕಲ್ಬುರ್ಗಿಯ ಪ್ರಾದೇಶಿಕ ಆಯುಕ್ತ ಕೃಷ್ಣ ಬಾಜಪೇಯಿ ಅವರು ಚುನಾವಣೆ ನಡೆಸಿ ಫಲಿತಾಂಶ ಘೋಷಿಸಿದರು. ಮೇಯರ್ ಸ್ಥಾನಕ್ಕೆ ಸ್ಪರ್ಧೆ ಮಾಡಿದ್ದ ಕಾಂಗ್ರೆಸ್‌ನ ನಂದೀಶ್ ೩೦ ಮತಗಳು ಪಡೆದುಕೊಂಡರೆ, ಬಿಜೆಪಿಯಿಂದ ಸ್ಪರ್ಧೆ ಮಾಡಿದ್ದ ಶ್ರೀನಿವಾಸ್ ಮೋತ್ಕರ್ ೧೪ ಮತಗಳನ್ನು ಪಡೆದರು. ಅದೇ ರೀತಿ ಉಪ ಮೇಯರ್ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನ ಡಿ.ಸುಕುಂ ಅವರು ೩೦ ಮತ ಪಡೆದರೆ, ಬಿಜೆಪಿಯ ಚೇತನ ೧೪ ಮತ ಪಡೆದರು.

**<><*<><>*><>**

ವಿಜಯಪುರ ಜಿಲ್ಲೆ ಬಬಲೇಶ್ವರ ತಾಲ್ಲೂಕಿನಲ್ಲಿ ಇರುವ ಐತಿಹಾಸಿಕ ಮಮದಾಪುರ ಕೆರೆಯನ್ನು ಒಂದು ಕೋಟಿ ರೂಪಾಯಿ ವೆಚ್ಚದಲ್ಲಿ ಪುನಶ್ಚೇತನಗೊಳಿಸಲು ಕೊಕೊಕೋಲಾ ಕಂಪನಿ ಮುಂದೆ ಬಂದಿದೆ ಎಂದು ಜಿಲ್ಲಾ ಉಸ್ತುವಾರಿ ಹಾಗೂ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ೧೯ನೇ ಶತಮಾನದಲ್ಲಿ ನಿರ್ಮಿಸಲಾಗಿದ್ದ ಮಮದಾಪುರ ಕೆರೆಯು ರಾಜ್ಯದ ಅತಿದೊಡ್ಡ ಕೆರೆಗಳಲ್ಲಿ ಒಂದಾಗಿದ್ದು, ೯೬೪ ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರುಣಿಸುತ್ತದೆ ಎಂದು ಸಚಿವರು ತಿಳಿಸಿದ್ದಾರೆ. ಕೋಕಾಕೋಲಾ ಕಂಪನಿಯು ಕೆರೆಗೆ ನೀರು ಪೂರೈಸುವ ಮುಖ್ಯ ನಾಲೆಯ ಹೂಳೆತ್ತಿ, ಬಾಂದಾರವನ್ನು ನಿರ್ಮಿಸಲಿದೆ. ಜೊತೆಗೆ ಕೆರೆಯ ಏರಿ ಬಲಪಡಿಸುವಿಕೆ, ಬೇಲಿ, ಪಾದಚಾರಿ ಮಾರ್ಗ ಮತ್ತು ಮಕ್ಕಳಿಗೆ ಆಟದ ಜಾಗವನ್ನು ಮಾಡಿಕೊಡಲಿದೆ

ಎಂದು ಅವರು ಮಾಹಿತಿ ನೀಡಿದ್ದಾರೆ. ಕೆರೆಯ ಸುತ್ತಮುತ್ತ ಹಸಿರಿನಿಂದ ತುಂಬಿರುವ ೧ ಸಾವಿರದ ೬೫೪ ಎಕರೆ ಅರಣ್ಯವಿದೆ. ಕೆರೆ ಪುನಶ್ಚೇತನದ ಬಳಿಕ ಈ ಸ್ಥಳವು ಪ್ರವಾಸಿ ಆಕರ್ಷಣೆಯ ತಾಣವಾಗಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಾಮಾನ...

ರಾಜ್ಯದ ಒಳನಾಡು, ಕರಾವಳಿ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಇಂದಿನಿಂದ ಇದೇ ೨೫ರವರೆಗೆ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಸಂದರ್ಭದಲ್ಲಿ ಬಲವಾದ ಗಾಳಿಯ ಜೊತೆಗೆ ಭೂಕುಸಿತವಾಗುವ ಸಂಭವವೂ ಇದೆ ಎಂದು ಇಲಾಖೆ ಎಚ್ಚರಿಕೆ ನೀಡಿದೆ. ಕರಾವಳಿ ಮತ್ತು ಉತ್ತರ ಒಳನಾಡಿನಲ್ಲಿಂದು ನೈಋತ್ಯ ಮುಂಗಾರು ಸಾಧಾರಣವಾಗಿತ್ತು ಹಾಗೂ ದಕ್ಷಿಣ ಒಳನಾಡಿನಲ್ಲಿ ದುರ್ಬಲವಾಗಿತ್ತು. ಪ್ರಮುಖವಾಗಿ ಉತ್ತರ ಕನ್ನಡ ಜಿಲ್ಲೆಯ ಕದ್ರಾದಲ್ಲಿ ೧೧, ಬೆಳಗಾವಿಯ ಲೋಂಡಾದಲ್ಲಿ ೧೦ ಹಾಗೂ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರದಲ್ಲಿ ೮ ಸೆಂಟಿ ಮೀಟರ್ ಮಳೆಯಾಗಿದೆ. ತೀವ್ರ ಬಿರುಗಾಳಿಯಿಂದ ಕರಾವಳಿಯಲ್ಲಿ ೩೫ ರಿಂದ ೫೫ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸಲಿದ್ದು, ಮೀನುಗಾರರು ಎಚ್ಚರಿಕೆಯಿಂದ ಇರಬೇಕು ಎಂದು ಹವಾಮಾನ ಇಲಾಖೆ ತಿಳಿಸಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿರಲಿದ್ದು, ಲಘು ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೩೧, ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗುವ ಸಂಭವಿದೆ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು...**

೧. ಕೋಲಾರ ನಗರಸಭೆ ವ್ಯಾಪ್ತಿಯಲ್ಲಿನ ಸಾರ್ವಜನಿಕರ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಖಾತೆ, ಬಿ-ಖಾತೆ ನೀಡಲು ರಾಜ್ಯ ಸರ್ಕಾರ ಮುಂದಾಗಿದ್ದು, ಆದಷ್ಟು ಬೇಗ ಸಮಸ್ಯೆಗಳಿಗೆ ಪರಿಹಾರ ನೀಡಲಾಗುವುದು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂ ಖಾನ್ ಭರವಸೆ ನೀಡಿದ್ದಾರೆ.

೨. ಮಹಾತ್ಮ ಗಾಂಧಿ ನರೇಗಾ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕಾದರೆ ತಳಮಟ್ಟದಲ್ಲಿ ವಿವಿಧ ಅನುಷ್ಠಾನ ಇಲಾಖೆಗಳ ನಡುವೆ ಉತ್ತಮ ಸಮನ್ವಯತೆ, ಪರಸ್ಪರ ಸಹಕಾರದಿಂದ ನಿಗದಿತ ಗುರಿ ಸಾಧಿಸಲು ಸಾಧ್ಯವಾಗುತ್ತದೆ. ಆ ನಿಟ್ಟಿನಲ್ಲಿ ಎಲ್ಲರೂ ಕಾರ್ಯಪ್ರವರ್ತರಾಗಬೇಕು ಎಂದು ಉತ್ತರಕನ್ನಡ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ ಹೇಳಿದರು.

೩. ರಾಜ್ಯ ಆಹಾರ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರ ತಂಡ ಮೂರು ದಿನಗಳ ಕಾಲ ಮೈಸೂರು ಜಿಲ್ಲೆಯ ವಿವಿಧೆಡೆ ಸಂಚರಿಸಿ ನ್ಯೂನ್ಯತೆಗಳನ್ನು ಗಮನಿಸುವುದರೊಂದಿಗೆ, ಉತ್ತಮ ಕಾರ್ಯಗಳನ್ನು ಮಾಡಿರುವ ಅಧಿಕಾರಿ ಸಿಬ್ಬಂದಿಗೆ ಆಯೋಗದ ಅಧ್ಯಕ್ಷ ಡಾ.ಹೆಚ್.ಕೃಷ್ಣ ಶ್ಲಾಘಿಸಿದ್ದಾರೆ.

೪. ಬಾಗಲಕೋಟೆ ಜಿಲ್ಲೆಯಲ್ಲಿ ೧೧ನೇ ಕೃಷಿ ಗಣತಿಯ ಮೊದಲ ಹಂತದ ಕ್ಷೇತ್ರಕಾರ್ಯ ಮುಕ್ತಾಯಗೊಂಡಿದ್ದು, ಕಳೆದ ೧೦ನೇ ಕೃಷಿ ಗಣತಿಗೆ ಹೋಲಿಸಿದರೆ, ಮಹಿಳಾ ಹಿಡುವಳಿದಾರರ ಸಂಖ್ಯೆಯಲ್ಲಿ ಗಣನೀಯವಾಗಿ ಏರಿಕೆ ಕಂಡು ಬಂದಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೦೫ ಕ್ಕೆ <>*><>**